## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀಮತಿ. ಇಂದಿರಮ್ಮ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹೊನ್ನೇನಹಳ್ಳಿ ಗ್ರಾಮ ಪಂಚಾಯಿತಿ, ಕೋಲಾರ ತಾಲ್ಲೂಕು, ಕೋಲಾರ ಜಿಲ್ಲೆ. ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14ಎ ಅಡಿಯಲ್ಲಿ ಮಾನ್ಯ ಉಪಲೋಕಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.

**ಓದಲಾಗಿದೆ**

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ D.O.No. Compt/UPLOK/BD/775/2014/ARLO-1, ದಿನಾಂಕ: 16.02.2017.

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ: 17.01.2017 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಈ ಕೆಳಗಿನಂತೆ ತಿಳಿಸಿರುತ್ತಾರೆ.

1. ಕೋಲಾರ ಜಿಲ್ಲೆ ಮತ್ತು ತಾಲ್ಲೂಕು ಟಮಕ ಅಂಚೆ ಹೊನ್ನೇಹಳ್ಳಿ ಗ್ರಾಮದ ನಿವಾಸಿಯಾದ ಶ್ರೀ. ಲಿಂಗಾಚಾರಿ ಲೇ. ನಾರಾಯಣಾಚಾರಿ ತಮ್ಮ ದೂರಿನಲ್ಲಿ ಕೋಲಾರ ಜಿಲ್ಲೆ ಮತ್ತು ತಾಲ್ಲೂಕು ಹೊನ್ನೇಹಳ್ಳಿ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಯಾದ ಶ್ರೀಮತಿ. ಇಂದಿರಮ್ಮ ರವರ ವಿರುದ್ಧ ಕರ್ತವ್ಯ ಲೋಪದ ಬಗ್ಗೆ ನೀಡಿದ ದೂರನ್ನು ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9ರ ಅಡಿಯಲ್ಲಿ ತನಿಖೆಗೆ ತೆಗೆದುಕೊಂಡಿದ್ದಿದೆ.

2. ದೂರಿನ ಸಂಕ್ಷಿಪ್ತ ವಿವರಣೆ :- ಕೋಲಾರ ಜಿಲ್ಲೆ ಮತ್ತು ತಾಲ್ಲೂಕು ಹೊನ್ನೇನಹಳ್ಳಿ ಗ್ರಾಮದ ಸರ್ವೆ ನಂ. 15 ರಲ್ಲಿ ನಿವೇಶನ ಸಂ. 39 ವಿಸ್ತೀರ್ಣ ಪೂರ್ವ-ಪಶ್ಚಿಮ 40 ಅಡಿ, ಉತ್ತರ – ದಕ್ಷಿಣ 30 ಅಡಿ ವಿಸ್ತೀರ್ಣದ ಸ್ವತ್ತು ದಿ:03.07.1993 ರಂದು ಸರ್ಕಾರದಿಂದ ಮಂಜೂರಾಗಿ ಹಕ್ಕುಪತ್ರವನ್ನು ಸಹ ನೀಡಿದ್ದಾರೆ. ದೂರುದಾರರು ಸದರಿ ನಿವೇಶನದಲ್ಲಿ ಮನೆ ಕಟ್ಟಲು ಪರವಾನಗಿಯನ್ನು ಎದುರುದಾರರಿಂದ ಕೋರಲಾಗಿ, ಎದುರುದಾರರು ಈವರೆವಿಗೂ ಸಹ ಪರವಾನಗಿಯನ್ನು ನೀಡಿಲ್ಲ ಮತ್ತು ಸ್ಥಳ ಗುರುತಿಸಿಲ್ಲವೆಂದು ಹೇಳಿದ್ದಾರೆ.

3. ದೂರಿಗೆ ಎದುರುದಾರರುಗಳಿಂದ ಆಕ್ಷೇಪಣೆಯನ್ನು ಕೇಳಲಾಗಿ, ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ–

ದೂರುದಾರರು ಕೋರಿದ ಅರ್ಜಿಗೆ ಸಂಬಂಧಿಸಿದಂತೆ, ದಿನಾಂಕ: 25.10.2012 ರಂದು ಹಿಂಬರಹ ನೀಡಿದ್ದು, ಅದರಲ್ಲಿ ದಿ: 05.10.12 ರ ಗ್ರಾಮ ಪಂಚಾಯತ್ ಸಾಮಾನ್ಯ ಸಭೆಯಲ್ಲಿ ಚರ್ಚಿಸಿ, ದೂರುದಾರರ ಮನೆಯ ನಕ್ಷೆ ಹಾಗೂ ದಾಖಲಾತಿಗಳನ್ನು ಗ್ರಾಮ ಪಂಚಾಯತ್‌ಗೆ ನೀಡಿಲ್ಲ ಮತ್ತು ದೂರುದಾರರ ನಿವೇಶನ ತಾಳೆಗೆ ಬರುತ್ತಿಲ್ಲ. ಈ ಬಗ್ಗೆ ತಹಶೀಲ್ದಾರ್‌ರವರು ಸರ್ವೆ ಮಾಡಿಸಿ, ಬಡಾವಣೆಯ ಗಡಿಯನ್ನು ಗುರುತಿಸಲು ಸರ್ವಾನುಮತದಿಂದ ತೀರ್ಮಾನಿಸಲಾಗಿದೆ. ಸರ್ವೆ ನಂ. 15 ವಿವಾಧಿತ ಸ್ವತ್ತಾಗಿದ್ದು, ಹಲವಾರು ನಿವಾಸಿಗಳು ಗುಂಪು ಕಟ್ಟಿಕೊಂಡು ತಕರಾರು ಮಾಡುತ್ತಿದ್ದಾರೆ. ಈ

ಬಗ್ಗೆ ತಹಶೀಲ್ದಾರ್‌ರವರಿಗೆ ಅರ್ಜಿ ಬರೆದು ಅಳತೆಗೆ ಕೋರಿದ್ದು, ಅಳತೆ ಮಾಡಿದ ನಂತರ ಕ್ರಮ ಕೈಗೊಳ್ಳಲಾಗುವುದು, ಸದರಿ ನಿವೇಶನಗಳಿಗೆ ಸಂಬಂಧಿಸಿದಂತೆ, ತಾಲ್ಲೂಕು ಪಂಚಾಯತ್ ಕೋಲಾರ ರವರಿಗೆ ಪತ್ರ ಬರೆಯಲಾಗಿದೆಯೆಂದು ಹೇಳಿದ್ದಾರೆ.

4. ದೂರಿನ ಬಗ್ಗೆ ತನಿಖೆ ಕೈಗೊಂಡು ವರದಿ ಸಲ್ಲಿಸುವಂತೆ ತಹಶೀಲ್ದಾರ್, ಕೋಲಾರ ರವರಿಗೆ ಕೇಳಲಾಗಿ ಸದರಿಯವರು ತಮ್ಮ ವರದಿಯಲ್ಲಿ,

ಸದರಿ ಸ್ವತ್ತನ್ನು ಮಂಜೂರಾದ ನಂತರ ದಾಖಲೆ ಸಹಿತ ತಾಲ್ಲೂಕು ಪಂಚಾಯತ್ ಕಛೇರಿಗೆ ಹಸ್ತಾಂತರಿಸಲಾಗಿದೆಯೆಂದು ಮತ್ತು ಗ್ರಾಮ ಪಂಚಾಯತ್‌ನ ದಾಖಲೆಗಳನ್ವಯ ಸದರಿ ನೀಲಿ ನಕ್ಷೆಯು ಗ್ರಾಮ ಪಂಚಾಯತ್‌ನಲ್ಲಿ ಲಭ್ಯವಿದ್ದು, ಈ ಬಗ್ಗೆ ನೀಲಿ ನಕ್ಷೆ ಮತ್ತು ಖಾತಾ ಉದ್ಧೃತ ಭಾಗವನ್ನು ಹಾಜರುಪಡಿಸಿರುವುದಾಗಿ ಹೇಳಿದ್ದಾರೆ.

5. ಕಡತ ಮತ್ತು ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಕಂಡು ಬರುವ ಅಂಶಗಳೇನೆಂದರೆ :

ಕೋಲಾರ ಜಿಲ್ಲೆ ಮತ್ತು ತಾಲ್ಲೂಕು, ಹೊನ್ನೇನಹಳ್ಳಿ ಗ್ರಾಮದ ಸರ್ವೆ ನಂ. 15 ರಲ್ಲಿ ನಿವೇಶನ ಸಂಖ್ಯೆ:39 ವಿಸ್ತೀರ್ಣ 40*30 ಅಡಿ, ಅದರ ಚಕ್ಕುಬಂದಿ ಪೂರ್ವಕ್ಕೆ ಖಾಸಗಿ ಜಮೀನು, ಪಶ್ಚಿಮಕ್ಕೆ ರಸ್ತೆ, ಉತ್ತರಕ್ಕೆ ನಿವೇಶನ ಸಂ. 40, ದಕ್ಷಿಣಕ್ಕೆ ನಿವೇಶನ ಸಂ. 38 ರ ಆಸ್ತಿಯು ದಿ:03.07.1993 ರಂದು ಸರ್ಕಾರದಿಂದ ಆಶ್ರಯ ಯೋಜನೆ ಅಡಿ ಮಂಜೂರಾಗಿ ಹಕ್ಕುಪತ್ರವನ್ನು ಸಹ ದೂರುದಾರರಿಗೆ ನೀಡಿದ್ದಾರೆ. ಸದರಿ ನಿವೇಶನವು ದೂರುದಾರರಿಗೆ ಸರ್ಕಾರದಿಂದ ಮಂಜೂರಾಗಿರುವುದು ಸ್ಪಷ್ಟವಾಗಿ ಕಂಡು ಬಂದಿದೆ. ದೂರುದಾರರಿಗೆ ಪರವಾನಗಿ ನೀಡಲು ಅವಶ್ಯಕವಾದ ಹಕ್ಕುಪತ್ರ, ಡಿಮ್ಯಾಂಡ್ ವಹಿಯ ಉದ್ಧೃತ ಭಾಗ, ನೀಲಿ ನಕ್ಷೆ ಪ್ರತಿಗಳು ಲಭ್ಯವಿದ್ದು, ಸದರಿ ದಾಖಲೆಗಳ ಸಂರಕ್ಷಕರು ಸಹ ಎದುರುದಾರರೇ ಆಗಿದ್ದಾರೆ. ದೂರುದಾರರಿಗೆ ಪರವಾನಗಿ ನೀಡುವ ಬಗ್ಗೆ ಸರಿಯಾದ ರೀತಿ ದಾಖಲೆಗಳನ್ನು ಪರಿಶೀಲಿಸದೇ, ತಪ್ಪು ಹಿಂಬರಹ ನೀಡಿ, ದೂರುದಾರರಿಗೆ ತೊಂದರೆ ನೀಡಿ, ಕರ್ತವ್ಯ ಲೋಪ ಎಸಗಿರುವುದು ಮೇಲ್ನೋಟಕ್ಕೆ ಕಂಡು ಬಂದಿದೆ.

6. ಮೇಲ್ಕಂಡ ಅಂಶಗಳು, ಕಡತದ ಸಂಗತಿಗಳು ಹಾಗೂ ದಾಖಲಾತಿಗಳನ್ನು ಹಾಗೂ ಎದುರುದಾರರ ಆಕ್ಷೇಪಣೆಯನ್ನು ಕೂಲಂಕಷವಾಗಿ ಪರಿಶೀಲಿಸಿದಾಗ, ಸದರಿ ಎದುರುದಾರರ ವಿರುದ್ಧದ ನಡವಳಿಯನ್ನು ಕೈಬಿಡಲು ಸೂಕ್ತ/ಸಮಂಜಸ/ಸಮಾಧಾನಕರ ಕಾರಣ ತೋರಿಸಿಲ್ಲವೆಂಬ ಅಭಿಪ್ರಾಯಕ್ಕೆ ಬರಲಾಗಿದೆ.

7. ಕಡತದಲ್ಲಿಯ ಸಂಗತಿಗಳು ಹಾಗೂ ದಾಖಲಾತಿಗಳಿಂದ, ಎದುರುದಾರರು ಸರ್ಕಾರಿ/ಸಾರ್ವಜನಿಕ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠತೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಮಡ ದುರ್ವರ್ತನೆ/ದುರ್ನಡತೆ ಮೇಲ್ನೋಟಕ್ಕೆ ಕಂಡು ಬರುತ್ತದೆ.

ಈ ಹಿನ್ನೆಲೆಯಲ್ಲಿ ಶ್ರೀಮತಿ. ಇಂದಿರಮ್ಮ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹೊನ್ನೇನಹಳ್ಳಿ ಗ್ರಾಮ ಪಂಚಾಯಿತಿ, ಕೋಲಾರ ತಾಲ್ಲೂಕು, ಕೋಲಾರ ಜಿಲ್ಲೆ. ಇವರು ಸರ್ಕಾರಿ ನೌಕರರಾಗಿದ್ದು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ, 1966 ರ ನಿಯಮ 3(1)ರ ಅಡಿಯಲ್ಲಿ ದರ್ನಡತೆ/ದುರ್ವರ್ತನೆ ಕಂಡು ಬರುವುದರಿಂದ, ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ಮಾಡಲು, ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿ 1957 ನಿಯಮ 14 (ಎ) ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14–ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/157/ಗ್ರಾಪಂಕಾ/2017 ಬೆಂಗಳೂರು, ದಿನಾಂಕ– 28–03–2017.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀಮತಿ. ಇಂದಿರಮ್ಮ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹೊನ್ನೇನಹಳ್ಳಿ ಗ್ರಾಮ ಪಂಚಾಯಿತಿ, ಕೋಲಾರ ತಾಲ್ಲೂಕು, ಕೋಲಾರ ಜಿಲ್ಲೆ. ಇವರ ವಿರುದ್ಧ ಇಲಾಖಾ ವಿಚಾರಣಾ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಗಳು ನಿಯಮ 14–ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ ನಿಯಮಾನುಸಾರ ಸೂಕ್ತ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. ( ಪುಟ 1 ರಿಂದ 60 ರವರೆಗೆ ಮೂಲ ದಾಖಲೆಗಳನ್ನು ಇದರೊಂದಿಗೆ ಲಗತ್ತಿಸಿ ಹಿಂದಿರುಗಿಸಿದೆ).
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಕೋಲಾರ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಕೋಲಾರ ತಾಲ್ಲೂಕು, ಕೋಲಾರ ಜಿಲ್ಲೆ.
6. ಶ್ರೀಮತಿ. ಇಂದಿರಮ್ಮ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹೊನ್ನೇನಹಳ್ಳಿ ಗ್ರಾಮ ಪಂಚಾಯಿತಿ, ಕೋಲಾರ ತಾಲ್ಲೂಕು, ಕೋಲಾರ ಜಿಲ್ಲೆ.
7. ಗಣಕಕೋಶ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.